**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-3**

ಸಂಖ್ಯೆ:ಎ8/ಮಾರ್ಚ್20/ಪ್ರ.ಪ.ಸು/39/2020-21 ದಿನಾಂಕ:20.08.2020

**:: ಸುತ್ತೋಲೆ ::**

ವಿಷಯ:-ಜೂನ್/ಜುಲೈ-2020ರ ಮಾಹೆಯಲ್ಲಿ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆಯ ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಪಡೆಯಲು ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಿಸಿರುವ ಬಗ್ಗೆ.

ಉಲ್ಲೇಖ:- ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:10.08.2020.

*****

ಜೂನ್/ಜುಲೈ-2020ರಲ್ಲಿ ನಡೆದ ಎಸ್.ಎಸ್.ಎಲ್.ಸಿ ಪರೀಕ್ಷೆಯ ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಾಗಿ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಕೆಲವು ಶಾಲೆಗಳ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಪೋಷಕರು ಮಂಡಳಿಗೆ ದೂರವಾಣಿಯ ಮುಖಾಂತರ ಸಂಪರ್ಕಿಸಿ ಕೋರಿರುತ್ತಾರೆ. ಈ ಸಂಬಂಧ ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಿ ಆದೇಶಿಸಿದೆ.

| ವಿವರ | ಈ ಮೊದಲು ನಿಗಧಿಪಡಿಸಿದ್ದ ದಿನಾಂಕ | ವಿಸ್ತರಿಸಿರುವ ಅಂತಿಮ ದಿನಾಂಕ |
|---|---|---|
| ಜೂನ್/ಜುಲೈ-2020ರ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 20.08.2020 | 27.08.2020 |
| ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಿದ ನಂತರ ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬ್ಯಾಂಕಿಗೆ ಪಾವತಿಸಲು ಅಂತಿಮ ದಿನಾಂಕ: | 21.08.2020 | 28.08.2020 |
| ಜೂನ್/ಜುಲೈ-2020ರ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 24.08.2020 | 29.08.2020 |
| ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ನಂತರ ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬ್ಯಾಂಕಿಗೆ ಪಾವತಿಸಲು ಅಂತಿಮ ದಿನಾಂಕ: | 25.08.2020 | 31.08.2020 |

ಮೇಲೆ ವಿವರಿಸಿರುವಂತೆ ದಿನಾಂಕ ವಿಸ್ತರಿಸಿರುವ ಮಾಹಿತಿಯನ್ನು ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳ ಮುಖ್ಯ ಶಿಕ್ಷಕರುಗಳ ಮುಖಾಂತರ ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತಂದು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಕ್ರಮವಹಿಸುವಂತೆ ತಿಳಿಸಿದೆ.

(ಸುಮಂಗಲ)

ನಿರ್ದೇಶಕರು (ಪರೀಕ್ಷೆಗಳು)

ಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯೋಪಾಧ್ಯಾಯರಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಕಛೇರಿ ಪ್ರತಿ.

A8_letter1